# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್ ರಸ್ತೆ, ತುಮಕೂರು -572103

ಸಂಖ್ಯೆ:ತುವಿ:ಶೈ.ವಿ:UG:2025-26/1173 ದಿನಾಂಕ:28.07.2025

## ಸುತ್ತೋಲೆ

ವಿಷಯ :2025-26ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಸ್ನಾತಕ ಪದವಿ ಪ್ರೋಗ್ರಾಂಗಳ ಪ್ರವೇಶಾತಿ ಕುರಿತು.

ಉಲ್ಲೇಖ: 1. ವಿವಿ ಶೈಕ್ಷಣಿಕ ವೇಳಾಪಟ್ಟಿ ಅಧಿಸೂಚನೆ ಪತ್ರದ ಸಂಖ್ಯೆ: ಸಂಖ್ಯೆ: ತುವಿ: ಶೈವಿ:UG:CE:2025-26 /252 ದಿನಾಂಕ:02.05.2025.

2. ವಿವಿ ಸುತ್ತೋಲೆ ಪತ್ರದ ಸಂಖ್ಯೆ: ತುವಿ:ಶೈ.ವಿ:UG:2025-26:/381 ದಿನಾಂಕ:16.05.2025.
3. ಕರ್ನಾಟಕ ಸರ್ಕಾರದ ಸಚಿವಾಲಯ ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯ-1) ಬೆಂಗಳೂರು ಇವರ ಪತ್ರದ ಸಂಖ್ಯೆ:ಇಡಿ 216 ಯುಎನ್‌ಇ 2025 ದಿನಾಂಕ:30.06.2025.
4. ವಿವಿ ಸುತ್ತೋಲೆ ಪತ್ರದ ಸಂಖ್ಯೆ: ತುವಿ:ಶೈ.ವಿ:UG:2025-26:/972 ದಿನಾಂಕ:15.07.2025.
5. ವಿವಿಧ ಕಾಲೇಜುಗಳ ಪ್ರಾಂಶುಪಾಲರುಗಳ ಮನವಿ ಪತ್ರಗಳು.
6. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:25.07.2025.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ ಸಂಯೋಜಿತ/ ಘಟಕ/ ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಿಳಿಯಪಡಿಸುವುದೇನೆಂದರೆ, ವಿಶ್ವವಿದ್ಯಾನಿಲಯದ ಶೈಕ್ಷಣಿಕ ವೇಳಾಪಟ್ಟಿಯನ್ವಯ 2025-26ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಸ್ನಾತಕ ಪದವಿ ಕೋರ್ಸುಗಳಿಗೆ ಪ್ರವೇಶಾತಿ ಪಡೆಯಲು ಉಲ್ಲೇಖ (03)ರ ಸರ್ಕಾರದ ಆದೇಶದಂತೆ ಮತ್ತು ಉಲ್ಲೇಖ(04)ರ ವಿಶ್ವವಿದ್ಯಾನಿಲಯದ ಸುತ್ತೋಲೆಯಲ್ಲಿ ಈಗಾಗಲೇ ತಿಳಿಸಿರುವಂತೆ 2024-25ನೇ ಸಾಲಿನ ದ್ವಿತೀಯ ಪಿಯುಸಿ **(PUC Supplementory 1, 2 & 3ರ) ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮಾತ್ರ ಯಾವುದೇ ದಂಡ ಶುಲ್ಕವಿಲ್ಲದೆ ಪ್ರವೇಶಾತಿ ಕೊನೆಯ ದಿನಾಂಕ:30.08.2025ರ ವರೆಗೆ** ನಿಗದಿಪಡಿಸಲಾಗಿರುತ್ತದೆ.

ಮುಂದುವರೆದಂತೆ, ಉಲ್ಲೇಖ (05)ರ ಮನವಿ ಪತ್ರವನ್ನು ಓದಲಾಗಿ ಇನ್ನುಳಿದಂತೆ ಪ್ರವೇಶಾತಿ ಬಯಸುವ ವಿದ್ಯಾರ್ಥಿಗಳಿಗೆ ರೂ.1200/-ಗಳ ದಂಡ ಶುಲ್ಕದೊಂದಿಗೆ ಪ್ರವೇಶಾತಿಯ ಕೊನೆಯ ದಿನಾಂಕ:31.07.2025ರ ವರೆಗೆ ಇರುತ್ತದೆ ಎಂದು ಉಲ್ಲೇಖ (06)ರ ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ಈ ಮೂಲಕ ತಿಳಿಸಲಾಗಿದೆ.

ಒಂದು ವೇಳೆ ವಿಶ್ವವಿದ್ಯಾನಿಲಯವು ನಿಗಧಿಪಡಿಸಿರುವ ದಿನಾಂಕದೊಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸದಿದ್ದಲ್ಲಿ ಕಾಲೇಜಿನವರೆ ಜವಾಬ್ದಾರರಾಗಿರುತ್ತೀರಿ ಎಂದು ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ,

ಉಪಕುಲಸಚಿವರು 28/7

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ

1. ಪ್ರಾಂಶುಪಾಲರುಗಳು ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
2. ಪ್ರಾಂಶುಪಾಲರುಗಳು ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.

ಪ್ರತಿಗಳು:

1. ಕುಲಸಚಿವರು (ಮೌಲ್ಯಮಾಪನ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ವೆಬ್‌ಸೈಟ್‌ನಲ್ಲಿ ಇಂದೇ ಪ್ರಕಟಿಸುವುದು
5. ಕಛೇರಿ ಪ್ರತಿ.